ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) ಬಂದಿದೆ.

ಆ) ಬಂದಿದೆ.

ಇ) ಸದರಿ ಪ್ರಸ್ತಾವನೆಯ ಬಗ್ಗೆ ರೂ. 29.83 ಕೋಟಿಗಳ ಮೊತ್ತಕ್ಕೆ ರೇಖಾ ಅಂದಾಜನ್ನು ಸಿದ್ಧಪಡಿಸಲಾಗಿದ್ದು, ಯೋಜನೆಯು ಮೂಲತಃ ಕುಡಿಯುವ ನೀರಿನ ಯೋಜನೆಯಾಗಿರುವುದರಿಂದ ನಗರಾಭಿವೃದ್ಧಿ ಇಲಾಖೆ / ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಪ್ರಸ್ತಾವನೆಯನ್ನು ಕಳುಹಿಸಿಕೊಡಲಾಗಿದೆ.

949 ಶ್ರೀ ಓಲೇಕಾರ್ ನೆಹರು ಚನ್ನಬಸಪ್ಪ (ಹಾವೇರಿ) : ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾವೇರಿ ತಾಲ್ಲೂಕು ತಿಮ್ಮಾಪುರ ಏತ ನೀರಾವರಿ ಕಾಮಗಾರಿ ಯಾವಾಗ ಪ್ರಾರಂಭ ಮಾಡಲಾಗುವುದು;

ಆ) ಹಾಗಿದ್ದಲ್ಲಿ, ಪ್ರಾರಂಭಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು;

ಇ) ಹಿಂದುಳಿದ ಕ್ಷೇತ್ರಗಳ ಇಂತಹ ಕಾಮಗಾರಿಗಳನ್ನು ನಿಲ್ಲಿಸಿದಲ್ಲಿ ಜನತೆಗೆ ತೊಂದರೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) ಮತ್ತು ಆ) ಕೃಷ್ಣ ಜಲ ವಿವಾದ ನ್ಯಾಯಾಧೀಕರಣ–2 ಅಂತಿಮ ತೀರ್ಪನ್ನು ನೀಡಿದ ನಂತರ ರಾಜ್ಯಕ್ಕೆ ಲಭ್ಯವಾಗಬಹುದಾದ ನೀರಿನ ಪ್ರಮಾಣವನ್ನು ಆಧರಿಸಿ ಪರಿಗಣಿಸಲಾಗುವುದು.

ಇ) ನ್ಯಾಯಾಧೀಕರಣದ ತೀರ್ಪು ಬಂದಕೂಡಲೇ ಸದರಿ ಯೋಜನೆ ಬಗ್ಗೆ ಪರಿಶೀಲಿಸಲಾಗುವುದು.

90 ಶ್ರೀ ಪಾಟೀಲ್ ಎ.ಎನ್.(ನಡಹಳ್ಳಿ) (ದೇವರಹಿಪ್ಪರಗಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸದಾಗಿ ತಾಲ್ಲೂಕು ರಚನೆಗೆ ರಚಿಸಲಾದ ಸಮಿತಿಯು ಶಿಫಾರಸ್ಸು ಮಾಡಿದ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆಯೆ;